ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೫

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೊಂಬತ್ತನೇ ಅಧಿವೇಶನ

## ಶುಕ್ರವಾರ, ದಿನಾಂಕ: ೧೭ನೇ ಜುಲೈ ೨೦೧೫

---

**ಸಮೂಹ – V**

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೫. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೬. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿಗಳ ವೇತನ ಬಿಡುಗಡೆ

**ಶ್ರೀ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೨೧೧ (೧೮೧೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿಗಳಿಗೆ ಪ್ರತಿ ತಿಂಗಳು ವೇತನ ಬಿಡುಗಡೆ ಮಾಡಲಾಗುವುದೆಂಬ ಆಶ್ವಾಸನೆಯಂತೆ ಏನು ಕ್ರಮ ಕೈಗೊಳ್ಳಲಾಗಿದೆ ;

(ಆ) ಇದಕ್ಕೆ ವಿರುದ್ಧವಾಗಿ ವೇತನ ಬಿಡುಗಡೆಯಲ್ಲಿ ಈಗಲೂ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸರ್ಕಾರಿ ಮತ್ತು ಅನುದಾನಿತ ಶಿಕ್ಷಣ ಸಿಬ್ಬಂದಿಗಳಿಗೆ ಆರ್.ಟಿ.ಜಿ.ಎಸ್./ ಇ.ಸಿ.ಎಸ್. ಮೂಲಕ ಸಂಬಳ ಬಿಡುಗಡೆಗಾಗಿ ಕ್ರಮಕೈಗೊಳ್ಳಲು ಸರ್ಕಾರ ಯೋಚಿಸಿದೆಯೇ ?

## ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಬಡ್ತಿ ಪಡೆದ ಶಿಕ್ಷಕರ ವೇತನ ತಾರತಮ್ಯ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೨೧೨ (೧೩೬೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಬಡ್ತಿ ಹೊಂದಿದ ಶಿಕ್ಷಕರು ಕಡಿಮೆ ವೇತನ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಬಡ್ತಿ ಹೊಂದಿದ ಶಿಕ್ಷಕರು ಒಂದೇ ದಿನ ಶಾಲೆಗೆ ಸೇರಿದ ಪ್ರಾಥಮಿಕ ಶಾಲಾ ಶಿಕ್ಷಕರಿಗಿಂತ ಕಡಿಮೆ ವೇತನ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಸಮಸ್ಯೆಯ ಪರಿಹಾರಕ್ಕೆ ಬಡ್ತಿ ಹೊಂದಿದ ಶಿಕ್ಷಕರ ಹಿಂದಿನ ಸೇವೆಯನ್ನು ಪರಿಗಣಿಸಿ, ಅವರಿಗೆ ೧೦, ೧೫, ೨೦, ೨೫ ಹಾಗೂ ೩೦ ವರ್ಷಗಳ ವೇತನ ಬಡ್ತಿ ನೀಡುವುದರ ಮೂಲಕ ಸರ್ಕಾರ ವೇತನ ತಾರತಮ್ಯ ಪರಿಹರಿಸಲು ಉದ್ದೇಶಿಸಿದೆಯೇ ;

(ಈ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಯಾವಾಗ ಆದೇಶ ಹೊರಡಿಸಲಿದೆ ?

## ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯದ ಸಿಬ್ಬಂದಿಗಳ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೧೩ (೧೮೨೨) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯದಲ್ಲಿ ಇರುವ ಬೋಧಕ/ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ಇದರಲ್ಲಿ, ಖಾಯಂ ಹಾಗೂ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ;

(ಇ) ಕಳೆದ ೦೨ ವರ್ಷಗಳಲ್ಲಿ ವಿಶ್ವವಿದ್ಯಾಲಯದಿಂದ ಪದವಿ, ಸ್ನಾತಕೋತ್ತರ ಪದವಿ, P.H.D., M.phil. ಪಡೆದವರ ಸಂಖ್ಯೆ ಎಷ್ಟು ;

(ಈ) ಈ ವಿಶ್ವವಿದ್ಯಾಲಯ ಸ್ಥಾಪನೆಯಾದಾಗಿನಿಂದ ಹಿಡಿದು ಇಲ್ಲಿಯವರೆಗೂ ಒದಗಿಸಿರುವ ವಾರ್ಷಿಕ ಹಾಗೂ ವಿಶೇಷ ಅನುದಾನ ಎಷ್ಟು ; (ವಿವರ ನೀಡುವುದು)

(ಉ) ಈ ವಿಶ್ವವಿದ್ಯಾಲಯದ ಸಮಗ್ರ ಅಭಿವೃದ್ಧಿಗೆ ನೀಲನಕ್ಷೆ ತಯಾರಿಸಲಾಗಿದೆಯೇ; ಇದಕ್ಕೆ ಅಂದಾಜಿಸಲಾದ ಮೊತ್ತ ಎಷ್ಟು ;

(ಊ) ಅದರ ಕಾರ್ಯಾನ್ವಯಕ್ಕೆ ಸರ್ಕಾರದ ಯೋಜನೆ ಏನು ?

## ಗ್ರಾಮ ಪಂಚಾಯತ್ ಸದಸ್ಯರ ಗೌರವಧನ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೧೪ (೧೩೭೨/೧೩೭೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಅವಧಿಯಲ್ಲಿ ರಾಜ್ಯದ ಗ್ರಾಮ ಪಂಚಾಯ್ತಿ ಸದಸ್ಯರುಗಳ ಗೌರವಧನವನ್ನು ನೀಡದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ೨೦೧೧ನೇ ಸಾಲಿನಿಂದ ೨೦೧೪–೧೫ ಸಾಲಿನವರೆಗೆ ಗ್ರಾಮ ಪಂಚಾಯತ್ ಸದಸ್ಯರಿಗೆ ನೀಡಬೇಕಾದ ಗೌರವಧನವೆಷ್ಟು ; ರಾಜ್ಯದ ಯಾವ ಯಾವ ಜಿಲ್ಲೆಗಳ ಗ್ರಾಮ ಪಂಚಾಯ್ತಿ ಎಷ್ಟು ಸದಸ್ಯರಿಗೆ ಎಷ್ಟು ಮೊತ್ತದ ಹಣವನ್ನು ಗೌರವಧನ ನೀಡಲು ಬಾಕಿ ಇರುತ್ತದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಆ ಪೈಕಿ ಎಷ್ಟು ಗ್ರಾಮ ಪಂಚಾಯತಿ ಸದಸ್ಯರುಗಳಿಗೆ ಗೌರವಧನ ನೀಡಲು ಬಾಕಿ ಇರುತ್ತದೆ ; (ಗ್ರಾಮ ಪಂಚಾಯತಿವಾರು ಮೊತ್ತದ ವಿವರ ನೀಡುವುದು)

(ಉ) ಬಾಕಿ ನೀಡಬೇಕಾಗಿರುವ ಗೌರವಧನವನ್ನು ಸದಸ್ಯರಿಗೆ ಯಾವ ಕಾಲಮಿತಿಯಲ್ಲಿ ನೀಡಲಾಗುವುದು ;

(ಊ) ಇತ್ತೀಚೆಗೆ ಸದರಿ ಗೌರವಧನವನ್ನು ಇಮ್ಮಡಿಗೊಳಿಸಲಾಗಿದೆಯೇ ; ವ್ಯತ್ಯಾಸದ ಮೊತ್ತವನ್ನು ವಾಪಸ್ ಕೇಳುತ್ತಿರುವ ಕಾರಣಗಳೇನು ;

(ಋ) ಒಂದು ಕಡೆ ಸಮರ್ಪಕವಾಗಿ ಸರಿಯಾದ ಸಮಯಕ್ಕೆ ವಿತರಿಸದೆ, ಅವಧಿ ಮುಗಿದಿದ್ದರೂ ಬಾಕಿ ಇಡಲು ಕಾರಣಗಳೇನು ಹಾಗೂ ಇಮ್ಮಡಿಗೊಂಡ ಹಣವನ್ನು ಯಾವಾಗ ನೀಡಲಾಗುತ್ತದೆ ? (ವಿವರ ಒದಗಿಸುವುದು)

## ದೈಹಿಕ ಶಿಕ್ಷಕರನ್ನು ಪ್ರೌಢಶಾಲೆಯ ಸಹ ಶಿಕ್ಷಕರೊಂದಿಗೆ ಸಮಾನವಾಗಿ ಗುರುತಿಸುವ ಬಗ್ಗೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) –**

೨೧೫ (೧೩೭೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ದೈಹಿಕ ಶಿಕ್ಷಕರನ್ನು ಪ್ರೌಢಶಾಲೆಗಳಲ್ಲಿ ವಿಜ್ಞಾನ, ಕಲಾ ಮತ್ತು ಭಾಷಾ ವಿಷಯಗಳನ್ನು ಬೋಧಿಸುವ ಸಹ ಶಿಕ್ಷಕರೊಂದಿಗೆ ಸರಿ ಸಮಾನವಾಗಿ ಗುರುತಿಸಲಾಗುತ್ತಿದೆಯೇ ;

(ಆ) ದೈಹಿಕ ಶಿಕ್ಷಕರಿಗೂ ಮುಖ್ಯೋಪಾಧ್ಯಾಯರಾಗಿ ಬಡ್ತಿ ನೀಡಲಾಗುವುದೇ ; ಇಲ್ಲವಾದಲ್ಲಿ, ಕಾರಣಗಳೇನು ;

(ಇ) ದೈಹಿಕ ಶಿಕ್ಷಣವನ್ನು ಎಷ್ಟನೇ ತರಗತಿಯವರೆಗೆ ಪಠ್ಯಕ್ರಮದಲ್ಲಿ ಜಾರಿಗೊಳಿಸಲಾಗಿದೆ ; ಪಠ್ಯಪುಸ್ತಕಗಳನ್ನು ಮುದ್ರಿಸಲಾಗಿದೆಯೇ ; ಈ ವಿಷಯದಲ್ಲಿ ವಾರ್ಷಿಕ ಪರೀಕ್ಷೆಗಳನ್ನು ನಡೆಸಲಾಗುತ್ತಿದೆಯೇ ; ಇಲ್ಲವಾದಲ್ಲಿ ಎಂದಿನಿಂದ ಜಾರಿಗೊಳಿಸಲಾಗುವುದು ?

## ಗೊಲ್ಲರ ಹಟ್ಟಿಯ ಹೆಣ್ಣು ಮಕ್ಕಳಿಗೆ ಹಾಗೂ ಬಾಣಂತಿಯರಿಗೆ ಪುನರ್ವಸತಿ ಕಲ್ಪಿಸುವ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೧೬ (೧೩೭೦) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಗೊಲ್ಲರದೊಡ್ಡಿ (ಗೊಲ್ಲರಹಟ್ಟಿ)ಗಳಲ್ಲಿ ಮುಟ್ಟಾದ ಹೆಣ್ಣು ಮಕ್ಕಳನ್ನು ಮತ್ತು ಬಾಣಂತಿಯರನ್ನು ಊರಿನ ಹೊರಗಿರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರವು ಈ ಅನಿಷ್ಠ ಪದ್ಧತಿಯನ್ನು ದೂರಮಾಡಲು ಅಥವಾ ಹೆಣ್ಣು ಮಕ್ಕಳಿಗೆ ಮತ್ತು ಬಾಣಂತಿಯರಿಗೆ ಬೇರೆ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಯೋಚಿಸಿದೆಯೇ ;

(ಇ) ಹಾಗಿದ್ದಲ್ಲಿ, ಸರ್ಕಾರ ಯಾವಾಗ ಯಾವ ರೀತಿ ಕ್ರಮವಹಿಸಲಾಗುವುದು ? (ಪೂರ್ಣ ಮಾಹಿತಿ ನೀಡುವುದು)

## ಕನ್ನಡ ಶಾಸ್ತ್ರೀಯ ಸ್ಥಾನಮಾನ ಪಡೆದ ಶಾಸ್ತ್ರೀಯ ಕೇಂದ್ರಗಳು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು)** –

೨೧೭ (೧೮೬೯) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ದೊರೆತ ನಂತರ ಶಾಸ್ತ್ರೀಯ ಕೇಂದ್ರಕ್ಕೆ ನೇಮಕಗೊಂಡಿರುವ ಯೋಜನಾ ನಿರ್ದೇಶಕರು ಯಾರು ; ಯಾವಾಗ ನೇಮಕಗೊಂಡರು ;

(ಆ) ರಾಜ್ಯ ಭಾಷೆ, ಕಲೆ, ಸಾಹಿತ್ಯ, ಪುರಾತತ್ವ, ಶಾಸನ ಶಾಸ್ತ್ರ ರಚನೆಗೆ ಸಂಬಂಧಪಟ್ಟಂತೆ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಭಾಷಾ ಸಂಶೋಧನೆ ಬಗ್ಗೆ ತೆಗೆದುಕೊಂಡಿರುವ ಯೋಜನೆಗಳೇನು ; ಯಾವ ಯಾವ ಕೃತಿಗಳನ್ನು ರಚನೆ ಮಾಡಲಾಗಿದೆ ; ಎಷ್ಟು ಭಾಷಾಂತರ ಕಾರ್ಯಗಳನ್ನು ಕೈಗೊಳ್ಳಲಾಗಿದೆ ; (ಚಟುವಟಿಕೆಗಳ ಬಗ್ಗೆ ವಿವರ ನೀಡುವುದು)

(ಈ) ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ಶಾಸ್ತ್ರೀಯ ಕ್ಷೇತ್ರದಿಂದ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮಗಳೇನು ? (ವಿವರ ನೀಡುವುದು)

## ಶಾಲಾ ಕಾಲೇಜುಗಳಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸುವ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು)** –

೨೧೮ (೧೩೯೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಎಲ್ಲಾ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಲೈಂಗಿಕ ಕಿರುಕುಳ ಹಾಗೂ ದೈಹಿಕ ಹಿಂಸೆಯನ್ನು ತಡೆಗಟ್ಟುವ ಹಿನ್ನೆಲೆಯಲ್ಲಿ ಸರ್ಕಾರ ಸಿ.ಸಿ. .ಕ್ಯಾಮರಾ ಅವಳಡಿಸುವ ಬಗ್ಗೆ ಆದೇಶ ನೀಡಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಎಲ್ಲಾ ಶಾಲಾ ಕಾಲೇಜುಗಳಲ್ಲಿ ಸಿ.ಸಿ. ಕ್ಯಾಮರಾಗಳನ್ನು ಕಡ್ಡಾಯವಾಗಿ ಅಳವಡಿಸಲಾಗಿದೆಯೇ ; (ಜಿಲ್ಲಾವಾರು ಸರ್ಕಾರಿ, ಖಾಸಗಿ, ಅನುದಾನಿತ ಶಾಲಾ–ಕಾಲೇಜುಗಳ ಮಾಹಿತಿ ನೀಡುವುದು)

(ಇ) ಸರ್ಕಾರ ಸಿ.ಸಿ. ಕ್ಯಾಮರಾ ಅಳವಡಿಸಿಕೊಳ್ಳುವ ಶಾಲಾ–ಕಾಲೇಜುಗಳಿಗೆ ನೀಡುವ ಅನುದಾನವೆಷ್ಟು ; ಯಾವ ಮಾನದಂಡದ ಮೇಲೆ ನೀಡಲಾಗುತ್ತದೆ;

(ಈ) ಸಿ.ಸಿ. ಕ್ಯಾಮರಾ ಅಳವಡಿಸದ ಶಾಲಾ–ಕಾಲೇಜುಗಳ ಆಡಳಿತ ಮಂಡಳಿಗಳ ಮೇಲೆ ಯಾವ ರೀತಿ ಕ್ರಮ ಜರುಗಿಸಲಾಗುವುದು ?

## ವಸತಿ ಮನೆಗಳ ಮಂಜೂರಾತಿ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೨೧೯ (೧೩೭೫) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೨ ವರ್ಷಗಳಲ್ಲಿ ಬೆಳಗಾಂ ಜಿಲ್ಲೆಗೆ ಬಸವ, ಆಶ್ರಯ, ಇಂದಿರಾ ಅವಾಜ್ ಹಾಗೂ ಇತರೆ ಯೋಜನೆಗಳಲ್ಲಿ ಎಷ್ಟು ಮನೆಗಳು ಮಂಜೂರಾಗಿವೆ; (ಗ್ರಾಮ ಪಂಚಾಯ್ತಿವಾರು ವಿವರ ನೀಡುವುದು)

(ಆ) ಮಂಜೂರು ಮಾಡಿದ್ದಲ್ಲಿ, ಈ ಮನೆಗಳು ಯಾವ ಹಂತದಲ್ಲಿವೆ ; ಅನುದಾನ ಬಾಕಿ ಇರುವ ಮನೆಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ವೃಂದ ಮತ್ತು ನೇಮಕಾತಿ ಅಳವಡಿಸುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ** (ವಿಧಾನಸಭೆಯಿಂದ ಚುನಾಯಿತರಾದವರು) –

೨೨೦ (೧೩೯೭) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಾಲ ಭವನ ಸೊಸೈಟಿಗೆ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ಜಾರಿಗೊಳಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ಜಾರಿಗೊಳಿಸದೆ ಇರುವುದರಿಂದ ಬಾಲ ಭವನ ಸೊಸೈಟಿಯಲ್ಲಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಿರುವುದಿಲ್ಲವೇ ;

(ಇ) ಈಗಾಗಲೇ ಬಾಲ ಭವನ ಸೊಸೈಟಿ ಆಡಳಿತ ಮಂಡಳಿ ಸಮಿತಿ ಸಭೆಯಲ್ಲಿ ನಿರ್ಣಯ ಕೈಗೊಂಡಿದ್ದರೂ ಇದನ್ನು ಜಾರಿಗೊಳಿಸದೆ ಇರುವುದಕ್ಕೆ ಕಾರಣಗಳೇನು ;

(ಈ) ವೃಂದ ಮತ್ತು ನೇಮಕಾತಿ ನಿಯಮಗಳನ್ನು ಜಾರಿಗೊಳಿಸಲು ಹಿಂದೇಟು ಹಾಕುತ್ತಿರುವ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ?

## ಶಿಕ್ಷಕರ ಸಂಬಳ ನೀಡುವಿಕೆಯ ಕುರಿತು

**ಶ್ರೀ ಅರಣ ಶಹಾಪೂರ (ಶಿಕ್ಷಕರ ಕ್ಷೇತ್ರ) –**

೨೨೧ (೧೮೫೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಶಿಕ್ಷಣ ಇಲಾಖೆಯ ಜಿಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಕರ ವೇತನವನ್ನು ಜಿಲ್ಲಾ ಪಂಚಾಯತ್‌ನ ವ್ಯವಸ್ಥೆಯ ಮೂಲಕವೇ ನೀಡಲಾಗುತ್ತಿದೆಯೇ ;

(ಆ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲಾ ಪಂಚಾಯತ್ ವ್ಯವಸ್ಥೆಯಲ್ಲಿ ಪ್ರತಿ ತಿಂಗಳು ಸರ್ಕಾರ ನಿಗಧಿಪಡಿಸಿದ ಸಮಯದೊಳಗೆ ಸಂಬಳ ಪಾವತಿಯಾಗುತ್ತಿದೆಯೇ ;

(ಇ) ಕಳೆದ ೨ ವರ್ಷಗಳಲ್ಲಿ ಸರ್ಕಾರಿ ಅನುದಾನಿತ ಶಾಲೆಗಳ ಯೋಜನಾ ಹಾಗೂ ಯೋಜನೇತರ ಅಡಿಯಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಶಿಕ್ಷಕರ ಸಂಬಳವು ಯಾವ ತಿಂಗಳಿನ ಸಂಬಳ, ಯಾವ ದಿನಾಂಕದಂದು ನೀಡಲಾಗಿದೆ ; (ವಿವರ ನೀಡುವುದು)

(ಈ) ವೈದ್ಯಕೀಯ ಮರುಪಾವತಿ ಪ್ರಕರಣಗಳು ಹಾಗೂ ಬಾಕಿ ಇರುವುದೆಷ್ಟು ; ಆ ಪ್ರಕರಣಗಳ ಮೊತ್ತ ಎಷ್ಟು ;

(ಉ) ಯಾವ ಯಾವ ಲೆಕ್ಕ ಶೀರ್ಷಿಕೆಯಡಿಯಲ್ಲಿ ಜಿಲ್ಲಾ ಪಂಚಾಯ್ತಿಯಿಂದ ಮತ್ತು ತಾಲ್ಲೂಕು ಪಂಚಾಯ್ತಿಯಿಂದ ವೇತನ ಬಿಡುಗಡೆ ಆಗುತ್ತದೆ ; (ವಿವರ ನೀಡುವುದು)

(ಊ) ಪ್ರತಿ ಜಿಲ್ಲಾ ಪಂಚಾಯತ್‌ನಲ್ಲಿ ಶಿಕ್ಷಕರ ಶೈಕ್ಷಣಿಕ ಅಭಿವೃದ್ಧಿಗಾಗಿ, ತರಬೇತಿ ಹಾಗೂ ಇನ್ನಿತರೆ ಕಾರ್ಯಗಳಿಗೆ ಜಿಲ್ಲಾ ಪಂಚಾಯತ್ ಅನುದಾನದಲ್ಲಿ ಒದಗಿಸಿರುವ ಅನುದಾನ ಎಷ್ಟು ? (ಕಳೆದ ೨ ವರ್ಷದ ವಿವರ ನೀಡುವುದು)

## ಬೆಳಗಾವಿ ಜಿಲ್ಲೆ, ಹಿರೇಬಾಗೇವಾಡಿ [redacted]ನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೨೨೨ (೧೮೪೫) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆ, ಹಿರೇಬಾಗೇವಾಡಿ [redacted]ನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ ಇಲ್ಲದೆ ಇರುವುದರಿಂದ, ಇಲ್ಲಿಯ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇಲ್ಲಿ ಕಾಲೇಜು ಪ್ರಾರಂಭಿಸಲು ಪರಿಶೀಲಿಸಲಾಗುವುದೇ ;

(ಇ) ಗ್ರಾಮ ಪಂಚಾಯಿತಿಯವರು ಎಲ್ಲಾ ಮೂಲಭೂತ ಸೌಕರ್ಯ ಒದಗಿಸಲು ಸಿದ್ಧರಿದ್ದು, ಸರ್ಕಾರವು ಪರಿಶೀಲಿಸಿ ಕಾಲೇಜು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಈ) ಇಲ್ಲಿ ಕಾಲೇಜು ಇಲ್ಲದೆ ಇರುವುದರಿಂದ ವಿದ್ಯಾರ್ಥಿಗಳು ಬೆಳಗಾವಿ ಅಥವಾ ಬೈಲಹೊಂಗಲಕ್ಕೆ ಹೋಗುವ ಪ್ರಸಂಗ ಬರುತ್ತಿದ್ದು, ಇದರಿಂದ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ತೊಂದರೆಯಾಗಿದ್ದು, ಕಾಲೇಜು ಪ್ರಾರಂಭಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ ?

## ರಾಜ್ಯದ ಅಂಗನವಾಡಿಗಳಲ್ಲಿನ ಮಕ್ಕಳಿಗೆ 'ಮೆಡಿಸಿನ್ ಕಿಟ್' ವಿತರಿಸುವ ಕುರಿತು

**ಶ್ರೀ ಎಸ್.ವ್ಹಿ. ಸಂತನೂರ (ಪದವೀಧರರ ಕ್ಷೇತ್ರ) –**

೨೨೩ (೧೮೪೪) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಅಂಗನವಾಡಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗಾಗಿ ಎಷ್ಟು ವರ್ಷಗಳಿಂದ ಮೆಡಿಸಿನ್ ಕಿಟ್ ವಿತರಿಸಲಾಗುತ್ತಿದೆ ;

(ಆ) ಹಾಗಿದ್ದಲ್ಲಿ, ಕಳೆದ ವರ್ಷ ಎಷ್ಟು ಮೆಡಿಸಿನ್ ಕಿಟ್‌ಗಳನ್ನು ವಿತರಣೆ ಮಾಡಲಾಗಿದೆ ; ಮತ್ತು ಪ್ರತಿ ಮೆಡಿಸಿನ್ ಕಿಟ್‌ನ ಮೌಲ್ಯ ಎಷ್ಟು ;

(ಇ) ಈ ಮೆಡಿಸಿನ್ ಕಿಟ್‌ಗಳನ್ನು ಇಲ್ಲಿಯವರೆಗೆ ಯಾವ ಕಂಪನಿಯಿಂದ ಖರೀದಿಸಿ ಪೂರೈಸಲಾಗಿದೆ ; ಖರೀದಿ ಮಾಡುವಾಗ ಯಾವ ನಿಯಮಗಳನ್ನು ಪಾಲಿಸಲಾಗಿದೆ ; ಖರೀದಿಸುವ ಪ್ರಕ್ರಿಯೆ ಯಾವ ತಿಂಗಳಲ್ಲಿ ಪೂರ್ಣಗೊಳ್ಳುತ್ತದೆ; (ವಿವರ ನೀಡುವುದು)

(ಈ) ೨೦೧೪–೧೫ನೇ ಸಾಲಿಗೆ ರಾಜ್ಯದಲ್ಲಿನ ಅಂಗನವಾಡಿಗಳಿಗೆ ಮೆಡಿಸಿನ್ ಕಿಟ್‌ಗಳನ್ನು ಒದಗಿಸಲಾಗಿದೆಯೇ ;

(ಉ) ೨೦೧೫–೧೬ನೇ ಸಾಲಿಗೆ ರಾಜ್ಯದ ಅಂಗನವಾಡಿಗಳಿಗೆ ಮೆಡಿಸಿನ್ ಕಿಟ್ ವಿತರಿಸುವುದಕ್ಕಾಗಿ ಯಾವ ಕಂಪನಿಯಿಂದ ಖರೀದಿಸಲಾಗಿದೆ ?

## ನೀರು ಪೂರೈಸುವ ಓವರ್‌ಹೆಡ್ ಟ್ಯಂಕುಗಳ ವಿವರ

**ಶ್ರೀ ಸೋಮಣ್ಣ ಮೆ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೨೨೪ (೧೮೬೬) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾವೇರಿ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ನೀರು ಪೂರೈಸುವ ಓವರ್ ಹೆಡ್ ಟ್ಯಾಂಕ್ ಎಷ್ಟು ; ಇದನ್ನು ಯಾವ ಸಾಲಿನಲ್ಲಿ ನಿರ್ಮಿಸಲಾಗಿದೆ ; (ತಾಲ್ಲೂಕುವಾರು ಮತ್ತು ಗ್ರಾಮವಾರು ಮಾಹಿತಿ ಒದಗಿಸುವುದು)

(ಆ) ಸದರಿ ಟ್ಯಾಂಕುಗಳನ್ನು ನಿರ್ಮಿಸಿದ ನಂತರ ಎಷ್ಟು ವರ್ಷ ಸಾರ್ವಜನಿಕ ಬಳಕೆಗೆ ಬಳಸಬಹುದು ; ಇಂತಹ ಎಷ್ಟು ಟ್ಯಾಂಕುಗಳಿವೆ ;

(ಇ) ಪ್ರಸ್ತುತ ಶಿಥಿಲಾವಸ್ಥೆಯಲ್ಲಿರುವ ಟ್ಯಾಂಕ್‌ಗಳ ಸಂಖ್ಯೆ ಎಷ್ಟು ; ಇವುಗಳು ಯಾವುದೇ ಸಂದರ್ಭದಲ್ಲಿ ಕುಸಿದು ಜನರ ಪ್ರಾಣಹಾನಿಯಾಗುವ ಸಂಭವ ಇರುವುದರಿಂದ ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ?

## ಬಡ್ತಿ ಹೊಂದಿರುವ ಶಿಕ್ಷಕರ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೨೨೫ (೧೮೧೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರಿಂದ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರಾಗಿ ಬಡ್ತಿ ಹೊಂದಿರುವ ಶಿಕ್ಷಕರುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಶಿಕ್ಷಕರುಗಳಿಗೆ ೧೦–೧೫–೨೦ ವರ್ಷಗಳ ಕಾಲಮಿತಿ ವೇತನ ಬಡ್ತಿ, ಮುಖ್ಯೋಪಾಧ್ಯಾಯರ ಹುದ್ದೆಗೆ ಮುಂಬಡ್ತಿ, ಹಾಗೂ ವರ್ಗಾವಣೆ ಪ್ರಕ್ರಿಯೆಯಲ್ಲಿ ಆಗಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿವೆಯೇ;

(ಇ) ಬಂದಿದ್ದರೆ, ಈ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ7, ಕಾ.ಸೂ. , ಪ್ರತಿಗಳು 1500